# ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಇವರ ನಡವಳಿಗಳು

**ವಿಷಯ:** 2017–18ನೇ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಗಳ ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆಯಡಿ ಅಲ್ಪಸಂಖ್ಯಾತರ ಕಾಲೋನಿಗಳ ಮೂಲಭೂತ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡುವ ಕುರಿತು.

**ಉಲ್ಲೇಖ:**
1) ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 169 ಎಂಡಿಎಸ್ 2017 ದಿನಾಂಕ: 06.04.2017
2) ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 169 ಎಂಡಿಎಸ್ 2017 ದಿನಾಂಕ: 25.04.2017
3) ಈ ಕಛೇರಿ ಆದೇಶ ಸಂಖ್ಯೆ: ಅಸಂನಿ/ಅಕಾಮೂಸೌಅಕಾ/ಸಿಆರ್–165/2016–17 ದಿನಾಂಕ: 21.03.2017.
4) ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 192 ಎಂಡಿಎಸ್ 2017 ದಿನಾಂಕ: 21.07.2017.

>>>()<<<

**ಪ್ರಸ್ತಾವನೆ:–**

ಉಲ್ಲೇಖ(1)ರ ಸರ್ಕಾರಿ ಆದೇಶದಲ್ಲಿ 2016–17ನೇ ಸಾಲಿನಲ್ಲಿ ಚಾಲ್ತಿಯಲ್ಲಿರುವ ಯೋಜನೆಗಳನ್ನು 2017–18ನೇ ಸಾಲಿನವರೆಗೆ ಮುಂದುವರೆಸಲು ಆದೇಶಿಸಿದೆ. ಉಲ್ಲೇಖ (2)ರ ಸರ್ಕಾರಿ ಆದೇಶದಲ್ಲಿ 2017–18ನೇ ಸಾಲಿನ ವಿವಿಧ ಯೋಜನೆಯಡಿ ಒದಗಿಸಲಾದ ಆಯವ್ಯಯದಲ್ಲಿ ಮೊದಲನೇ ತ್ರೈಮಾಸಿಕ ಕಂತಾಗಿ ಶೇ.25 ರಷ್ಟು ಅನುದಾನ ಬಿಡುಗಡೆ ಮಾಡಿ ಆದೇಶಿಸಿದೆ.

ಉಲ್ಲೇಖ (3)ರ ಈ ಕಛೇರಿ ಆದೇಶದಲ್ಲಿ ಮಾನ್ಯ ಮುಖ್ಯಮಂತ್ರಿಗಳ ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆಯಡಿ 2016–17ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಾಲೋನಿಗಳ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳ ಯೋಜನೆಯನ್ನು ಅನುಷ್ಠಾನಗೊಳಿಸಲು ರೂ. 25.00 ಕೋಟಿಗಳ ಅನುದಾನ ಮಂಜೂರು ಮಾಡಿರುವುದನ್ನು ವಿವಿಧ ವಿಧಾನಸಭಾ ಕ್ಷೇತ್ರವಾರು 15 ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದೆ.

ಉಲ್ಲೇಖ (4)ರ ಸರ್ಕಾರದ ಆದೇಶದಲ್ಲಿ 2017–18ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 222 ರಲ್ಲಿ ಘೋಷಿಸಿರುವಂತೆ ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯ ಒದಗಿಸಲು (ಕಾಲೋನಿ ಅಭಿವೃದ್ಧಿ) ರೂ. 800 ಕೋಟಿಗಳ ಅನುದಾನವನ್ನು ಮೀಸಲಿರಿಸಿ ನೀಡಿರುವ ಷರತ್ತುಗಳೊಂದಿಗೆ ಅನುಷ್ಠಾನಗೊಳಿಸಲು ಅನುಮೋದನೆ ನೀಡಿ ಆದೇಶಿಸಿದೆ. ಸದರಿ ಆದೇಶದನ್ವಯ ಅಲ್ಪಸಂಖ್ಯಾತರ ಕಾಲೋನಿಗಳ ಮೂಲಭೂತ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಎರಡನೇ ಕಂತಿನ ಅನುದಾನ ರೂ.50.00 ಕೋಟಿ (ರೂ. ಐವತ್ತು ಕೋಟಿಗಳು ಮಾತ್ರ)ಗಳನ್ನು ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಅನುದಾನ ಬಿಡುಗಡೆ ಮಾಡಲು ನಿರ್ಧರಿಸಿದ್ದು ಅದರಂತೆ ಈ ಆದೇಶ

## ಆದೇಶ

**ಸಂಖ್ಯೆ: ಅಸಂನಿ/ಅಕಾಮೂಸೌಅಕಾ/ಸಿಆರ್–50/2017–18** **ದಿನಾಂಕ:02.08.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನಾಧರಿಸಿ ಉಲ್ಲೇಖ (4)ರ ಸರ್ಕಾರದ ಆದೇಶದಲ್ಲಿ 2017–18ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 222 ರಲ್ಲಿ ಘೋಷಿಸಿರುವಂತೆ ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯ ಒದಗಿಸಲು (ಕಾಲೋನಿ ಅಭಿವೃದ್ಧಿ) ರೂ. 800 ಕೋಟಿಗಳ ಅನುದಾನವನ್ನು ಮೀಸಲಿರಿಸಿ ನೀಡಿರುವ ಷರತ್ತುಗಳೊಂದಿಗೆ ಅನುಷ್ಠಾನಗೊಳಿಸಲು ಅನುಮೋದನೆ ನೀಡಿ ಆದೇಶಿಸಿದೆ.

ಸರ್ಕಾರದ ಆದೇಶದಂತೆ ಅಲ್ಪಸಂಖ್ಯಾತರ ಕಾಲೋನಿಗಳ ಮೂಲಭೂತ ಸೌಕರ್ಯ ಅಭಿವೃದ್ಧಿ ಕಾಮಗಾರಿಗಳಿಗೆ ಈ ಕೆಳಕಂಡಂತೆ ಎರಡನೇ ಕಂತಿನ ಅನುದಾನ ರೂ.50.00 ಕೋಟಿ (ರೂ. ಐವತ್ತು ಕೋಟಿಗಳು ಮಾತ್ರ)ಗಳನ್ನು ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಅನುದಾನ ಬಿಡುಗಡೆ ಮಾಡಿದೆ ಹಾಗೂ ಪಾವತಿಸಲು ಮಂಜೂರಾತಿ ನೀಡಲಾಗಿದೆ.